ಗಣಕ ಶಾಖೆ
45 ①
12/3/2020

ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 944 |
| 2 | ಸದಸ್ಯರ ಹೆಸರು | : | ಶ್ರೀ ಅರವಿಂದ ಕುಮಾರ್ ಅರಳಿ. |
| 3 | ಉತ್ತರಿಸಬೇಕಾದ ದಿನಾಂಕ | : | 12.03.2020 |
| 4 | ಉತ್ತರಿಸುವವರು | : | ಸಣ್ಣ ನೀರಾವರಿ ಸಚಿವರು |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಎಷ್ಟು ಕೆರೆಗಳಿವೆ; ಅವುಗಳಲ್ಲಿ ಎಷ್ಟು ಕೆರೆಗಳಿಂದ ಹೂಳೆತ್ತಲಾಗಿದೆ; ಮತ್ತು ಎಷ್ಟು ಕೆರೆಗಳಲ್ಲಿ ನೀರು ಸಂಗ್ರಹಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಇನ್ನೂ ಮಾಡದೆ ಇರುವ ಕೆರೆಗಳಲ್ಲಿ ನೀರು ತುಂಬಿಸುವ ಯೋಜನೆಗಳೇನಾದರೂ ಸರ್ಕಾರದ ಮುಂದಿದೆಯೆ: ಇದ್ದಲ್ಲಿ ಅವು ಯಾವುವು? | ಬೀದರ್ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 125 ಕೆರೆಗಳಿವೆ. ಇವುಗಳಲ್ಲಿ 56 ಕೆರೆಗಳನ್ನು ವಿವಿಧ ಲೆಕ್ಕಶೀರ್ಷಿಕೆಯಡಿ ಅಭಿವೃದ್ಧಿ ಪಡಿಸಲು ಕೈಗೆತ್ತಿಕೊಳ್ಳಲಾಗಿದೆ. ಇವುಗಳಲ್ಲಿ ಒಟ್ಟು 15 ಕೆರೆಗಳ ಅಂಗಳದಿಂದ ಹೂಳನ್ನು ತೆಗೆಯಲಾಗಿದೆ.<br><br>ಸಣ್ಣ ನೀರಾವರಿ ಇಲಾಖೆಯಿಂದ ಯಾವುದೇ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿರುವುದಿಲ್ಲ.<br><br>ಜಲಸಂಪನ್ಮೂಲ ಇಲಾಖೆಯಿಂದ ಬಸವಕಲ್ಯಾಣ ತಾಲ್ಲೂಕಿನ 7 ಕೆರೆಗಳನ್ನು ಮಾಂಜ್ರಾ ನದಿಗೆ ನಿರ್ಮಿಸಿದ ಕೊಂಗಳಿ ಬ್ಯಾರೇಜ್‌ನಿಂದ ನೀರು ತುಂಬಿಸುವ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ ಹಾಗೂ ಬೀದರ್ ತಾಲ್ಲೂಕಿನ 27 ಮತ್ತು ಭಾಲ್ಕಿ ತಾಲ್ಲೂಕಿನ 6 ಕೆರೆಗಳನ್ನು ಮಾಂಜ್ರಾ ನದಿಗೆ ನಿರ್ಮಿಸಿರುವ ಚಂದಾಪುರ ಬ್ಯಾರೇಜ್‌ನಿಂದ ನೀರು ತುಂಬಿಸಲು ಡಿ.ಪಿ.ಆರ್. ಸಿದ್ಧಪಡಿಸಲಾಗುತ್ತಿದೆ. |

**ಕಡತ ಸಂಖ್ಯೆ: MID 15 LCQ 2020**

(signature)

**(ಜೆ.ಸಿ.ಮಾಧುಸ್ವಾಮಿ)**
ಕಾನೂನು, ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು